**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 17/2024**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ**.02

**ದಿನಾಂಕಃ** 06.11.2025 **ಸಿಡಬ್ಲ್ಯೂ**.02

| | |
|---|---|
| ಹೆಸರು | ತಿಪ್ಪೇಶ |
| ತಂದೆ ಹೆಸರು | ಅಜ್ಜಪ್ಪ |
| ವಯಸ್ಸು | 23 ವರ್ಷ |
| ಉದ್ಯೋಗ | ವ್ಯಾಪಾರ |
| ವಾಸ ಸ್ಥಳ | ನಾಗನೂರು |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ. 1 ಮತ್ತು 3 ರವರ ಪರಿಚಯವಿಲ್ಲ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು ಅದು ಪಂಚರಿಗೆ ನೀಡಿದ ನೋಟಿಸ್ ಆಗಿದ್ದು ಅದನ್ನು ನಿಪಿ.5 ಎಂದು ಸಾಕ್ಷಿಯ ಸಹಿಯನ್ನು ನಿಪಿ.5 (ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು ಅದು ಸ್ಥಳ ಪಂಚನಾಮೆಯಾಗಿದ್ದು ಅದನ್ನು ಈಗಾಗಲೇ ನಿಪಿ.2 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.2 (ಡಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು ಅದು ಕಚ್ಚಾ ನಕಾಶೆಯಾಗಿದ್ದು ಅದನ್ನು ಈಗಾಗಲೇ ನಿಪಿ.3 ಎಂದು ಸಾಕ್ಷಿಯ ಸಹಿಯನ್ನು ನಿಪಿ.3 (ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು ದಿಃ 20.08.2023 ರಂದು ನಿಟ್ಟೂರು ಗ್ರಾಮದ ಪಟ್ಟಾಭೀ ಯವರ ಮನೆ ಮುಂದೆ ಮಾಡಿರುತ್ತೇನೆ. ಆರೋಪಿತರು ಚಾಸಾ.1 ರವರನ್ನು ಹೊಡೆದ ವಿಚಾರವಾಗಿ ಪೊಲೀಸರು ಸ್ಥಳಕ್ಕೆ ಬಂದಿದ್ದು ಪಂಚನಾಮೆ ಮಾಡುವ ಕಾಲಕ್ಕೆ ಸಹಿ ಮಾಡಿರುತ್ತೇನೆ. ಪಂಚನಾಮೆ ಕಾಲಕ್ಕೆ ನಾನು ಚಾಸಾ.1 ಮತ್ತು 3 ರವರು ಇದ್ದೆವು. ಪೊಲೀಸರು ಸ್ಥಳದಲ್ಲಿ ಕಚ್ಚಾ ನಕಾಶೆ ಮತ್ತು ಛಾಯ ಚಿತ್ರ ತೆಗೆದಿರುತ್ತಾರೆ. ಸಾಕ್ಷಿಯು ಗುರುತಿಸಿದ ಛಾಯ ಚಿತ್ರವನ್ನು ಈಗಾಗಲೇ ನಿಪಿ.4 ಎಂದು ಗುರುತಿಸಲಾಗಿದೆ. ಸದರಿ ಪಂಚನಾಮೆಯನ್ನು ಮದ್ಯಾಹ್ನ ಸುಮಾರು 12.30 ರಿಂದ 1.30 ಗಂಟೆವರೆಗೆ ಮಾಡಿರುತ್ತಾರೆ. ಈ ವಿಚಾರವಾಗಿ ನಾನು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಬಿ ಜಿ ಬಿ ವಕೀಲರಿಂದಃ**

ಆರೋಪಿತರು ಚಾಸಾ.1 ರವರನ್ನು ದಿಃ 20.08.2023 ರಂದು ಹೊಡೆದಿದ್ದರು. ನಿಪಿ.2 ನ್ನು ಯಾರು ಹೇಳಿ ಬರೆಸಿಲ್ಲ. ನಾನು ಮೂಲತಃ ದಾವಣಗೆರೆ ತಾಲೂಕಿನ ನಾಗನೂರು ಗ್ರಾಮದವರು. ಇವತ್ತು ನ್ಯಾಯಾಲಯಕ್ಕೆ ನನ್ನನ್ನು ಚಾಸಾ.1 ರವರು ಕರೆದುಕೊಂಡು ಬಂದಿರುತ್ತಾರೆ. ನಿಪಿ.2 ರಲ್ಲಿ ಬರೆದಿರುವ ಸಂಗತಿಗಳ ಬಗ್ಗೆ ನನಗೆ ಮಾಹಿತಿ ಇದೆ. ನಿಪಿ.2 ರಲ್ಲಿ ಚೆಕ್ ಬಂದಿಯನ್ನು ನಾನೇ ಹೇಳಿ ಬರೆಸಿದ್ದೇನೆ. ಪೂರ್ವಕ್ಕೆ ಪಟ್ಟಾಭಿಯವರ ಮನೆ, ಪಶ್ಚಿಮಕ್ಕೆ ನೆನಪಿಲ್ಲ, ಉತ್ತರಕ್ಕೆ ರಸ್ತೆ ಮತ್ತು ದಕ್ಷಿಣಕ್ಕೆ ಗೊತ್ತಿಲ್ಲ. ನಿಪಿ.3 ಕಚ್ಚಾ ನಕಾಶೆಯನ್ನು ನಮ್ಮ ಸಮಕ್ಷಮ ಬರೆದಿರುತ್ತಾರೆ. ನಿಪಿ.2 ಮತ್ತು 3 ಕ್ಕೆ ಆರೋಪಿತರ ಮನೆ ಮುಂದೆ ಸಹಿ ಮಾಡಿರುತ್ತೇನೆ. ಪಂಚನಾಮೆಯಲ್ಲಿ ಹೇಳಿದ ಜಗಳ ಯಾವ ಕಾರಣಕ್ಕಾಗಿ ಆಗಿದೆ ಎಂದು ನನಗೆ ಮಾಹಿತಿ ಇಲ್ಲ. ದಿಃ 20.08.2023 ರಂದು ಪೊಲೀಸರಿಗೆ ನನ್ನ ಹೇಳಿಕೆ ನೀಡಿರುತ್ತೇನೆ. ಸದರಿ ಪೊಲೀಸರ ಹೆಸರು ಪದನಾಮೆ ನನಗೆ ಗೊತ್ತಿಲ್ಲ. ನನಗೆ ಯಾವುದೇ ಮಾಹಿತಿ ಇಲ್ಲದಿದ್ದರೂ ಸಹ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನನ್ನು ಚಾಸಾ.1 ರವರು ಕರೆದುಕೊಂಡು ಬಂದಿದ್ದರಿಂದ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಂಎಫ್‌ಸಿ, ಹರಿಹರ